ಇ) ಸಿಂಧಗಿಯ ತಾಲ್ಲೂಕುಮಟ್ಟದ ಆಸ್ಪತ್ರೆಗೆ ರೂ. 70.53 ಲಕ್ಷವನ್ನು ಕೆ.ಹೆಚ್.ಎಸ್. ಡಿ.ಪಿ.ಯಿಂದ ಒದಗಿಸಲಾಗಿದೆ. ಮತ್ತು ಸಿಂಧಗಿ ತಾಲ್ಲೂಕಿನ ಕೊರವರದಲ್ಲಿನ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣಕ್ಕೆ ರೂ. 3.40 ಲಕ್ಷವನ್ನು ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ ನಿಗಧಿಪಡಿಸಲಾಗಿದೆ.

ಈ) 2001ನೇ ಸಾಲಿನಲ್ಲಿ ಮುಕ್ತಾಯಗೊಳ್ಳುವ ನಿರೀಕ್ಷೆ ಇದೆ.

ಕಟ್ಟಡ ಪೂರ್ಣಗೊಂಡ ನಂತರ ವೈದ್ಯಕೀಯ ಸಲಕರಣೆ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಸಿಂಧಗಿ ತಾಲ್ಲೂಕಿನಲ್ಲಿ ಜವಾಹರ ರೋಜಗಾರ್ ಯೋಜನೆ

1036 - ಶ್ರೀ ಸುಣಗಾರ ಶರಣಪ್ಪ ತಿಪ್ಪಣ್ಣ (ಸಿಂಧಗಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸೆಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಿಂಧಗಿ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಸಲುವಾಗಿ ಗ್ರಾಮ ಪಂಚಾಯತಿಗಳ ಜವಾಹರ್ ರೋಜ್‌ಗಾರ್ ಯೋಜನೆಯ ಅಡಿಯಲ್ಲಿ ನಿಗಧಿಪಡಿಸಿದ ಮೊತ್ತ ಎಷ್ಟು?

ಆ) ಇದುವರೆಗೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದವರಿಗೆ ವೆಚ್ಚ ಮಾಡಿರುವ ಹಣವೆಷ್ಟು?

ಇ) ಇಲ್ಲಿಯವರೆಗೆ ಅಂದರೆ 1999ನೇ ಸಾಲಿನ ಆಯವ್ಯಯದಲ್ಲಿ ಜಿಲ್ಲಾ ಪಂಚಾಯತಿಗಳಿಗೆ ನಿಗಧಿಪಡಿಸಿದ ಮೊತ್ತ ಬಿಡುಗಡೆ ಮಾಡಿದ ಮೊತ್ತ ಹಾಗೂ ಖರ್ಚಾದ ಹಣವೆಷ್ಟು? (ವಿವರಣೆ ನೀಡುವುದು)

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಸಿಂಧಗಿ ತಾಲ್ಲೂಕಿನಲ್ಲಿ ಜವಾಹರ್ ರೋಜ್‌ಗಾರ್ ಯೋಜನೆಯ ಅಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಸಲುವಾಗಿ ನಿಗಧಿಪಡಿಸಿದ ಅನುದಾನದ ವಿವರ ಕೆಳಗಿನಂತಿದೆ.

ವರ್ಷ	ನಿಗಧಿಪಡಿಸಿದ ಹಣ *(ಲಕ್ಷ ರೂ.ಗಳಲ್ಲಿ)*
1998-99	16.840
1998-99 ಹೆಚ್ಚುವರಿ	6.460
1999-2000	25.000

ಆ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ವೆಚ್ಚ ಮಾಡಿರುವ ಹಣದ ವಿವರ ಕೆಳಗಿನಂತಿದೆ.

ವರ್ಷ	ನಿಗಧಿಪಡಿಸಿದ ಹಣ (ಲಕ್ಷ ರೂ.ಗಳಲ್ಲಿ)
1998-99	14.600
1998-99 ಹೆಚ್ಚುವರಿ	6.000
1999-2000	4.500

ಇ) 1999-2000ನೇ ಸಾಲಿನಲ್ಲಿ ಜವಾಹರ್ ಗ್ರಾಮ ಸಮೃದ್ಧಿ ಯೋಜನೆಯಡಿ ಬಿಜಾಪುರ ಜಿಲ್ಲೆಗೆ ನಿಗಧಿಪಡಿಸಿದ, ಬಿಡುಗಡೆ ಮಾಡಿದ ಮತ್ತು ಖರ್ಚಾದ ವಿವರಗಳು ಕೆಳಗಿನಂತಿದೆ.

(ಲಕ್ಷ ರೂ.ಗಳಲ್ಲಿ)

ನಿಗಧಪಡಿಸಿದ ಹಣ	ಬಿಡುಗಡೆ ಮಾಡಿದ ಹಣ	ಖರ್ಚಾದ ಹಣ
341.00	170.49	120.00

ಗೌರಿಬಿದನೂರು ತಾಲ್ಲೂಕಿನ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ

1039 - ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು?

ಆ) ಅನೇಕ ಶಾಲೆಗಳಿಗೆ ಸ್ವಂತ ಕಟ್ಟಡವು ಇಲ್ಲದೇ ಇರುವುದು, ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಹಾಗಿದ್ದಲ್ಲಿ ಈ ಸಮಸ್ಯೆಗಳ ನಿವಾರಣೆಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು?

ಇ) ಗೌರಿಬಿದನೂರು ತಾಲ್ಲೂಕಿನಲ್ಲಿ ನೂತನ ಸರ್ಕಾರ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರದ ಮುಂದೆ ಯಾವುದಾದರೂ ಯೋಜನೆಗಳು ಇವೆಯೇ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 132.

ಪ್ರಾಥಮಿಕ ಶಾಲೆಗಳು	116
ಪ್ರೌಢ ಶಾಲೆಗಳು	16

ಆ) ರಾಜ್ಯ ವಲಯ ಮತ್ತು ಕಪ್ಪು ಹಲಗೆ ಯೋಜನೆಯಡಿಯಲ್ಲಿ 1992-93ನೇ ಸಾಲಿನಿಂದ 1998-99ನೇ ಸಾಲಿನವರೆಗೆ 473 ಕೊಠಡಿಗಳು ನಿರ್ಮಾಣವಾಗಿರುತ್ತವೆ. ಪ್ರತಿ ವರ್ಷದಲ್ಲಿ ಕಟ್ಟಡ